All India Radio: Bangalore

National Bulletin In Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

08.09.2026 19.35 hrs

**<><><><>**

ಮುಖ್ಯಾಂಶಗಳು

- ಸಮಾಜ ಸೇವೆ, ಸ್ವಚ್ಛತೆಯನ್ನು ದೈನಂದಿನ ಅಭ್ಯಾಸ ಮಾಡಿಕೊಳ್ಳುವಂತೆ ನಾಗರಿಕರಿಗೆ ಪ್ರಧಾನಿ ನರೇಂದ್ರ ಮೋದಿ ಕರೆ
- ಗುಜರಾತ್‌ನ ಏಕ್ತಾ ನಗರದಲ್ಲಿ ಇದೇ ೨೨ರಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಂದ ೭೨ನೇ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ ಪ್ರದಾನ
- ದೇಶದಲ್ಲಿ ಒಂದು ಸಾವಿರದ ೮೯ ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಮುಂಗಾರು ಬೆಳೆ - ಕೇಂದ್ರ ಕೃಷಿ ಸಚಿವಾಲಯ ಮಾಹಿತಿ
- ವಿಶ್ವ ಬಿಲ್ಲುಗಾರಿಕೆ ಪ್ಯಾರಾ ಕ್ರೀಡಾಕೂಟ : ಭಾರತಕ್ಕೆ ಎರಡು ಚಿನ್ನ, ಒಂದು ಬೆಳ್ಳಿ ಪದಕ

<><><><>

ಅಭಿವೃದ್ಧಿ ಯೋಜನೆಗಳು ಕಟ್ಟಕಡೆಯ ವ್ಯಕ್ತಿಗೂ ತಲುಪುವ ನಿಟ್ಟಿನಲ್ಲಿ ಸಮಾಜ ಸೇವೆ ಮತ್ತು ಸ್ವಚ್ಛತೆಯನ್ನು ದೈನಂದಿನ ಅಭ್ಯಾಸವನ್ನಾಗಿ ಮಾಡಿಕೊಳ್ಳುವಂತೆ ಪ್ರಧಾನಿ ನರೇಂದ್ರ ಮೋದಿ ಅವರು ನಾಗರಿಕರಿಗೆ ಕರೆ ನೀಡಿದ್ದಾರೆ. ಗುಜರಾತ್‌ನ ನವಸಾರಿಯಲ್ಲಿ ಬೃಹತ್ ಸಾರ್ವಜನಿಕ ರ್‍ಯಾಲಿಯನ್ನುದ್ದೇಶಿಸಿ ಮಾತನಾಡಿದ ಅವರು, ಪಿಎಂ ಸ್ವ-ನಿಧಿ ಯೋಜನೆಯು ಸಾಲ ಮತ್ತು ಆಧುನಿಕ ಡಿಜಿಟಲ್ ಪಾವತಿ ಸೌಲಭ್ಯಗಳಿಗೆ ಸುಲಭ ಪ್ರವೇಶ ಖಚಿತಪಡಿಸಿಕೊಳ್ಳುವ ಮೂಲಕ ಸಣ್ಣ ಬೀದಿ ವ್ಯಾಪಾರಿಗಳಿಗೆ ಆರ್ಥಿಕ ನೆರವನ್ನು ಒದಗಿಸಿದೆ ಎಂದು ಹೇಳಿದರು. ಇದಕ್ಕೂ ಮುನ್ನ ಪ್ರಧಾನಿ ನರೇಂದ್ರ ಮೋದಿ ಅವರು ವಡೋದರಾದಲ್ಲಿ ೩೫ ಸಾವಿರ ಕೋಟಿ ರೂಪಾಯಿಗೂ ಅಧಿಕ ಮೌಲ್ಯದ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ಹಾಗೂ ಉದ್ಘಾಟನೆ ನೆರವೇರಿಸಿದರು. ಈ ಯೋಜನೆಗಳಲ್ಲಿ ೨೦ ಸಾವಿರದ ೭೦೦ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾದ 'ಪಶ್ಚಿಮಕ್ಕೆ ಮೀಸಲಾದ ಸರಕು ಸಾಗಣೆ ಕಾರಿಡಾರ್'ನ ಪೂರ್ಣಗೊಂಡ ಭಾಗಗಳನ್ನು ಅವರು ರಾಷ್ಟ್ರಕ್ಕೆ ಸಮರ್ಪಿಸಿದರು. ಇದರ ಜೊತೆಗೆ ವಿವಿಧ ಸರಕು ಹಾಗೂ ಹೊಸ ಪ್ರಯಾಣಿಕ ರೈಲು ಸೇವೆಗಳಿಗೆ ಪ್ರಧಾನಿ ಚಾಲನೆ ನೀಡಲಿದ್ದು, ಅಲಿರಾಜ್‌ಪುರದ ಗಿರಿಜನ ಪ್ರದೇಶಗಳನ್ನು ರೈಲು ಜಾಲಕ್ಕೆ ಜೋಡಿಸುವ ಜೋಬತ್-ತಾಂಡಾ ರಸ್ತೆ ಹೊಸ ಮಾರ್ಗವನ್ನು ಉದ್ಘಾಟಿಸಿದರು. ೬ ಸಾವಿರದ ೭೦೦ ಕೋಟಿ ರೂಪಾಯಿ ಮೌಲ್ಯದ ರೈಲ್ವೆ ಯೋಜನೆಗಳು, ೧ ಸಾವಿರದ ೭೮೦ ಕೋಟಿ ರೂಪಾಯಿ ವೆಚ್ಚದ ರಾಷ್ಟ್ರೀಯ ಹೆದ್ದಾರಿ ಯೋಜನೆಗಳು ಹಾಗೂ ಗುಜರಾತ್ ಸರ್ಕಾರದ ೨

ಸಾವಿರದ ೭೦೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಯೋಜನೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಚಾಲನೆ ನೀಡಿದರು.

<><><><>

ಗುಜರಾತ್‌ನ ಏಕ್ತಾ ನಗರದಲ್ಲಿ ಇದೇ ೨೨ ರಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ೭೨ನೇ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿಗಳನ್ನು ಪ್ರದಾನ ಮಾಡಲಿದ್ದಾರೆ. 'ಆರ್ಟಿಕಲ್ -೩೭೦' ಅತ್ಯುತ್ತಮ ಚಲನಚಿತ್ರ ವಿಭಾಗದಲ್ಲಿ ಪ್ರಶಸ್ತಿ ಪಡೆದಿದೆ. ಇದೇ ವೇಳೆ ಅತ್ಯುತ್ತಮ ನಾನ್ ಫೀಚರ್ ವಿಭಾಗದಲ್ಲಿ ಭಂಗಾರ್ ಹಾಗೂ ಅತ್ಯುತ್ತಮ ಸಾಕ್ಷ್ಯಚಿತ್ರ ವಿಭಾಗದಲ್ಲಿ 'ರಾಮ್-ನಮಿ' ಪ್ರಶಸ್ತಿಗೆ ಭಾಜನವಾಗಿದೆ. 'ಬ್ರಹ್ಮಯುಗಂ' ಚಿತ್ರದ ನಟನೆಗಾಗಿ ನಟ ಮಮ್ಮುಟ್ಟಿ ಹಾಗೂ ಚಂದು ಚಾಂಪಿಯನ್ ಚಿತ್ರದ ನಟನೆಗಾಗಿ ನಟ ಕಾರ್ತಿಕ್ ಆರ್ಯನ್ ಅವರು, ಅತ್ಯುತ್ತಮ ನಟ ಪ್ರಶಸ್ತಿ ಹಾಗೂ ಆರ್ಟಿಕಲ್-೩೭೦ ಚಿತ್ರದ ನಟನೆಗಾಗಿ ಯಾಮಿ ಗೌತಮ್ ಅವರು, ಅತ್ಯುತ್ತಮ ನಟಿ ಪ್ರಶಸ್ತಿಗೆ ಪಾತ್ರರಾಗಿದ್ದಾರೆ. ಸ್ವಾತಂತ್ರ್ಯ ವೀರ ಸಾವರ್ಕರ್ ಚಿತ್ರದ ನಿರ್ದೇಶಕ ರಣದೀಪ್ ಹೂಡಾ ಅವರು ಅತ್ಯುತ್ತಮ ಚೊಚ್ಚಲ ನಿರ್ದೇಶಕ ಪ್ರಶಸ್ತಿ ಸ್ವೀಕರಿಸಲಿದ್ದಾರೆ. ಇದೇ ರೀತಿ ಕನ್ನಡ, ಮರಾಠಿ, ತಮಿಳು, ತೆಲುಗು, ತುಳು, ಮಲಯಾಳಂ, ಸಂತಾಲಿ ಸೇರಿದಂತೆ ಇತರೆ ಭಾಷೆಗಳು ಮತ್ತು ಪ್ರಕಾರಗಳ ವಿಭಾಗಗಳಲ್ಲಿ ಪ್ರಶಸ್ತಿಗಳನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರದಾನ ಮಾಡಲಿದ್ದಾರೆ.

<><><><>

ದ್ವಿಪಕ್ಷೀಯ ರಕ್ಷಣಾ ಮತ್ತು ಕಡಲ ಸಹಕಾರವನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಇಂದು ಶ್ರೀಲಂಕಾಕ್ಕೆ ಮೂರು ದಿನಗಳ ಭೇಟಿಗಾಗಿ ಕೊಲಂಬೊ ತಲುಪಿದ್ದಾರೆ. ಬಂಡರಾನಾಯಕೆ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಅವರನ್ನು ಶ್ರೀಲಂಕಾ ರಕ್ಷಣಾ ಖಾತೆ ಉಪ ಸಚಿವೆ ಅರುಣಾ ಜಯಶೇಖರ ಮತ್ತು ಭಾರತೀಯ ಹೈಕಮಿಷನರ್ ಸಂತೋಷ್ ಝಾ ಆತ್ಮೀಯವಾಗಿ ಬರಮಾಡಿಕೊಂಡರು. ತಮ್ಮ ಭೇಟಿಯ ವೇಳೆ ಸಚಿವ ರಾಜನಾಥ್ ಸಿಂಗ್ ಅವರು, ಶ್ರೀಲಂಕಾದ ನಾಯಕರೊಂದಿಗೆ ವಿವಿಧ ವಿಷಯಗಳ ಕುರಿತು ಮಾತುಕತೆ ನಡೆಸಲಿದ್ದಾರೆ. ಉಭಯ ದೇಶಗಳ ನಡುವೆ ಬಲವಾದ ಕಡಲ ಮತ್ತು ರಕ್ಷಣಾ ಪಾಲುದಾರಿಕೆ ಸೇರಿದಂತೆ ಪರಸ್ಪರ ಪ್ರಯೋಜಕಾರಿ ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಸಂಬಂಧಗಳನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಚರ್ಚೆಗಳು ನಡೆಯಲಿವೆ. ಭೇಟಿಯ ಸಂದರ್ಭದಲ್ಲಿ ಸಚಿವ ರಾಜನಾಥ್ ಸಿಂಗ್ ಅವರು, ಕೊಲಂಬೊದಲ್ಲಿರುವ ಭಾರತೀಯ ಸಮುದಾಯದೊಂದಿಗೆ ಸಂವಾದ ನಡೆಸಲಿದ್ದಾರೆ.

<><><><>

ದೇಶದಲ್ಲಿ ಈ ತಿಂಗಳ ೪ನೇ ತಾರೀಕಿನವರೆಗೆ ಒಂದು ಸಾವಿರದ ೮೭ ಲಕ್ಷ ಹೆಕ್ಟೇರ್‌ಗಿಂತಲೂ ಹೆಚ್ಚು ಪ್ರದೇಶಗಳಲ್ಲಿ ಮುಂಗಾರು ಬೆಳೆಗಳನ್ನು ಬೆಳೆಯಲಾಗಿದೆ ಎಂದು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವಾಲಯ ತಿಳಿಸಿದೆ. ೪೨೧ ಲಕ್ಷ ಹೆಕ್ಟೇರ್‌ಗೂ ಹೆಚ್ಚು ಪ್ರದೇಶದಲ್ಲಿ ಭತ್ತ

ಬೆಳೆಯಲಾಗಿದೆ. ಒಟ್ಟು ೧೧೭ ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ದ್ವಿದಳ ಧಾನ್ಯಗಳನ್ನು ಬೆಳೆಯಲಾಗಿದೆ. ೧೮೧ ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ 'ಶ್ರೀ ಅನ್ನ' ಬೆಳೆಯಲಾಗಿದೆ. ೧೯೧ ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಎಣ್ಣೆ ಕಾಳುಗಳನ್ನು ಬೆಳೆಯಲಾಗಿದೆ. ೧೦೯ ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಹತ್ತಿ ಹಾಗೂ ೫೮ ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಕಬ್ಬು ಬೆಳೆಯಲಾಗಿದೆ ಎಂದು ಸಚಿವಾಲಯ ಮಾಹಿತಿ ನೀಡಿದೆ.

<><><><>

ರಾಜಸ್ಥಾನ, ಉತ್ತರ ಪ್ರದೇಶ ಮತ್ತು ತೆಲಂಗಾಣದಲ್ಲಿನ ಐಟಿಐ ಕ್ಲಸ್ಟರ್‌ಗಳಿಗೆ ಒಟ್ಟು ೭೩೫ ಕೋಟಿ ರೂಪಾಯಿಗಳ ಯೋಜನಾ ವೆಚ್ಚದೊಂದಿಗೆ ಕಾರ್ಯತಂತ್ರದ ಹೂಡಿಕೆ ಯೋಜನೆಗಳನ್ನು ಕೇಂದ್ರ ಸರ್ಕಾರ ಅನುಮೋದಿಸಿದೆ. ಇದರಲ್ಲಿ ರಾಜಸ್ಥಾನಕ್ಕೆ ೨೪೧ ಕೋಟಿ ರೂಪಾಯಿ ಹೂಡಿಕೆ ಯೋಜನೆ, ಉತ್ತರ ಪ್ರದೇಶಕ್ಕೆ ೨೪೦ ಕೋಟಿ ರೂಪಾಯಿ ಹಾಗೂ ತೆಲಂಗಾಣಕ್ಕೆ ೨೫೪ ಕೋಟಿ ರೂಪಾಯಿಗಳ ಹೂಡಿಕೆ ಯೋಜನೆ ಸೇರಿವೆ. ಪ್ರಧಾನಮಂತ್ರಿ ಕೌಶಲ್ಯ ಮತ್ತು ಉದ್ಯೋಗಾವಕಾಶ ಪರಿವರ್ತನೆ ಮೂಲಕ ಮೇಲ್ದರ್ಜೆಗೇರಿಸಿದ ಐಟಿಐ ಗಳಿಗೆ ಸಂಬಂಧಿಸಿದ ೫ನೇ ರಾಷ್ಟ್ರೀಯ ಸ್ಟೀರಿಂಗ್ ಸಮಿತಿ ಸಭೆಯಲ್ಲಿ ಇದನ್ನು ಅನುಮೋದಿಸಲಾಗಿದೆ.

<><><><>

ಕೇಂದ್ರ ನವ ಮತ್ತು ನವೀಕರಿಸಬಹುದಾದ ಇಂಧನ ಸಚಿವಾಲಯ ಹಾಗೂ ಅಂತಾರಾಷ್ಟ್ರೀಯ ಸೌರ ಒಕ್ಕೂಟ ಸಹಯೋಗದಲ್ಲಿ 'ಪಾಲುದಾರಿಕೆ ಮತ್ತು ಪ್ರದರ್ಶನ ಅವಕಾಶಗಳು' ವಿಷಯದಡಿ ಈ ವರ್ಷದ ನವೆಂಬರ್ ೨ ರಿಂದ ೫ ರವರೆಗೆ ನವದೆಹಲಿಯ ಭಾರತ ಮಂಟಪದಲ್ಲಿ 'ಭಾರತ ನವೀಕರಿಸಬಹುದಾದ ಇಂಧನ ಶೃಂಗಸಭೆ ಮತ್ತು ಎಕ್ಸ್‌ಪೋ ೨೦೨೬' ಆಯೋಜಿಸಲಾಗಿದೆ ಎಂದು ಕೇಂದ್ರ ನವ ಮತ್ತು ನವೀಕರಿಸಬಹುದಾದ ಇಂಧನ ಸಚಿವಾಲಯದ ಕಾರ್ಯದರ್ಶಿ ಸಂತೋಷ್ ಸಾರಂಗಿ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಅಂತಾರಾಷ್ಟ್ರೀಯ ಸೌರ ಒಕ್ಕೂಟದ ೯ನೇ ಅಧಿವೇಶನ ಮತ್ತು ೪ನೇ ಹಸಿರು ಹೈಡ್ರೋಜನ್ ಸಮ್ಮೇಳನದ ಬೆಂಗಳೂರು ಆವೃತ್ತಿಯ ರೋಡ್ ಶೋ ನಲ್ಲಿ ಭಾಗವಹಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನವೀಕರಿಸಬಹುದಾದ ಇಂಧನ ಕ್ಷೇತ್ರದಲ್ಲಿ ಕರ್ನಾಟಕ ಅದ್ಭುತ ಸಾಧನೆ ಮಾಡಿದೆ ಎಂದು ಹೇಳಿದರು. ಪ್ರಸ್ತುತ ರಾಜ್ಯದಲ್ಲಿ ಇಂಧನ ಉತ್ಪಾದನೆಯಲ್ಲಿ ನವೀಕರಿಸಬಹುದಾದ ಇಂಧನ ಕ್ಷೇತ್ರ ಶೇಕಡ ೭೦ರಷ್ಟು ಪಾಲು ಹೊಂದಿದೆ. ಹೆಚ್ಚಿನ ಸಂಖ್ಯೆಯಲ್ಲಿ ಖಾಸಗಿ ಪಾಲುದಾರರು ನವೀಕರಿಸಬಹುದಾದ ಇಂಧನ ಕ್ಷೇತ್ರದಲ್ಲಿ ಹೂಡಿಕೆ ಮಾಡುವ ನಿಟ್ಟಿನಲ್ಲಿ ಈ ರೋಡ್ ಶೋ ಆಯೋಜಿಸಲಾಗಿದೆ. ಅಲ್ಲದೇ ನವದೆಹಲಿಯಲ್ಲಿ ಮುಂಬರುವ ಶೃಂಗಸಭೆಯಲ್ಲಿ ಹೆಚ್ಚಿನ ಸಂಖ್ಯೆಯ ಪಾಲುದಾರರು ಭಾಗವಹಿಸುವಂತೆ ಆಹ್ವಾನಿಸಿದ್ದೇವೆ ಎಂದು ಸಂತೋಷ್ ಸಾರಂಗಿ ತಿಳಿಸಿದರು. ಈ ಸಂದರ್ಭದಲ್ಲಿ ಇಂಧನ ಸಚಿವ ಕೆ.ಜೆ. ಜಾರ್ಜ್ ಉಪಸ್ಥಿತರಿದ್ದರು.

<><><><>

ಬ್ರಿಕ್ಸ್ ಶೃಂಗಸಭೆಯ ನೇಪಥ್ಯದಲ್ಲಿ ಪ್ರಧಾನಿ ನರೇಂದ್ರ ಮೋದಿ ಹಾಗೂ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಈ ಕುರಿತು ಮಾಹಿತಿ ನೀಡಿದ ಕ್ರೆಮ್ಲಿನ್ ವಕ್ತಾರ ಡಿಮಿಟ್ರಿ ಪೆಸ್ಕೊವ್, ಉಭಯ ನಾಯಕರು ಪರಸ್ಪರ ಹಿತಾಸಕ್ತಿಯ ವಿಷಯಗಳ ಕುರಿತು ಚರ್ಚಿಸುವ ನಿರೀಕ್ಷೆಯಿದೆ. ಜಾಗತಿಕವಾಗಿ ಭಾರತ ಮತ್ತು ರಷ್ಯಾ ಪ್ರಮುಖ ರಾಷ್ಟ್ರಗಳಾಗಿವೆ. ಬ್ರಿಕ್ಸ್ ಶೃಂಗಸಭೆಯ ಕಾರ್ಯಸೂಚಿಯಲ್ಲಿ ಕೃತಕ ಬುದ್ಧಿಮತ್ತೆ ವಿಷಯ ಪ್ರಮುಖವಾಗಿರುತ್ತದೆ ಎಂದು ತಿಳಿಸಿದ್ದಾರೆ.

<><><><>

ಪ್ರಧಾನಿ ನರೇಂದ್ರ ಮೋದಿ ಅವರು, ಇಂದು ಕೇಂದ್ರ ಮಹಿಳಾ ಮಕ್ಕಳ ಅಭಿವೃದ್ಧಿ ಸಚಿವೆ ಅನ್ನಪೂರ್ಣ ದೇವಿ ಬರೆದ ಲೇಖನವನ್ನು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದ್ದಾರೆ. ಮಾತೃ ವಂದನಾ ಯೋಜನೆ ಮತ್ತು ಪೋಷಣ್ ಮಾಸಿಕದ ೧೦ ವರ್ಷಗಳ ಕುರಿತಾದ ಲೇಖನವು ಅಂಗನವಾಡಿ ವ್ಯವಸ್ಥೆಯನ್ನು ಜನಾಂದೋಲನವನ್ನಾಗಿ ಮಾಡುವ ಸಂದೇಶವನ್ನು ಎತ್ತಿ ತೋರಿಸುತ್ತದೆ ಎಂದು ಪ್ರಧಾನಿ ಹೇಳಿದ್ದಾರೆ. ನೇರ ಲಾಭ ವರ್ಗಾವಣೆ, ಸಾಮಾಜಿಕ ಲೆಕ್ಕ ಪರಿಶೋಧನೆ ಹಾಗೂ ಪೌಷ್ಟಿಕ ಆಹಾರವು ಮಕ್ಕಳು, ಮಹಿಳೆಯರು ಮತ್ತು ಹದಿಹರೆಯದ ಹುಡುಗಿಯರನ್ನು ಹೇಗೆ ಬೆಂಬಲಿಸುತ್ತದೆ ಎಂಬುದನ್ನು ಈ ಲೇಖನ ಒತ್ತಿ ಹೇಳುತ್ತದೆ. ಈ ಪ್ರಯತ್ನಗಳು, ಅಪೌಷ್ಟಿಕತೆ ಮುಕ್ತ ಮತ್ತು ವಿಕಸಿತ ಭಾರತಕ್ಕೆ ದಾರಿ ಮಾಡಿಕೊಡುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಪ್ರತಿಪಾದಿಸಿದ್ದಾರೆ.

<><><><>

ಅಹಮದಾಬಾದ್‌ನಲ್ಲಿ ನಡೆದ ವಿಶ್ವ ಬಿಲ್ಲುಗಾರಿಕೆ ಪ್ಯಾರಾ ಕ್ರೀಡಾಕೂಟ ಸರಣಿಯ ಮೂರನೇ ಹಂತದಲ್ಲಿ ಭಾರತ ಅದ್ಭುತ ಪ್ರದರ್ಶನ ನೀಡಿದೆ. ಪುರುಷರ ತಂಡ ಸ್ಪರ್ಧೆಗಳಲ್ಲಿ ಎರಡು ಚಿನ್ನ ಮತ್ತು ಮಹಿಳೆಯರ ರಿಕರ್ವ್ ವಿಭಾಗದಲ್ಲಿ ಬೆಳ್ಳಿ ಪದಕ ಗೆದ್ದಿದೆ. ಕಾಂಪೌಂಡ್ ತಂಡ ಸ್ಪರ್ಧೆಯಲ್ಲಿ ಹಾಲಿ ವಿಶ್ವ ಚಾಂಪಿಯನ್ ತೋಮನ್ ಕುಮಾರ್ ಹಾಗೂ ಶ್ಯಾಮ್‌ಸುಂದರ್ ಸ್ವಾಮಿ ಜೋಡಿ, ಇರಾಕ್‌ನ ಅಬ್ಬಾಸ್ ಕದಿಮ್ ಮತ್ತು ಅನ್ವರ್ ಜೋಡಿ ವಿರುದ್ಧ ೧೫೨-೧೪೯ ಅಂತರದಲ್ಲಿ ಗೆಲುವು ಸಾಧಿಸಿ, ಚಿನ್ನದ ಪದಕ ವಿಜೇತರಾಗಿದ್ದಾರೆ. ಪುರುಷರ ರಿಕರ್ವ್ ಸ್ಪರ್ಧೆಯಲ್ಲಿ ಹರ್ವಿಂದರ್ ಸಿಂಗ್ ಮತ್ತು ವಿಜಯ್ ಸುಂಡಿ ಜೋಡಿ, ಸ್ಲೋವಾಕಿಯಾದ ಡೇವಿಡ್ ಇವಾನ್ ಮತ್ತು ಡೆನಿಸ್ ಇವಾನ್ ಅವರನ್ನು ೬-೨, ೬-೨ ಅಂತರದಿಂದ ಸೋಲಿಸಿ ಚಿನ್ನದ ಪದಕ ಗೆದ್ದರು. ಮಹಿಳಾ ರಿಕರ್ವ್ ತಂಡ ವಿಭಾಗದ ಫೈನಲ್‌ನಲ್ಲಿ ಭಾವನಾ ಮತ್ತು ಪೂಜಾ ಜೋಡಿ, ಚೀನಾ ಜೋಡಿ ವಿರುದ್ಧ ೦-೬ ಅಂತರದಲ್ಲಿ ಪರಾಭವಗೊಂಡ ನಂತರ ಬೆಳ್ಳಿ ಪದಕಕ್ಕೆ ತೃಪ್ತಿ ಪಟ್ಟರು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>